# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 634 |
| ಸದಸ್ಯರ ಹೆಸರು | ಶ್ರೀ ಭೀಮರಾವ್ ಬಸವರಾಜ್ ಪಾಟೀಲ್ |
| ಉತ್ತರಿಸುವ ದಿನಾಂಕ | 12.03.2025 |
| ಉತ್ತರಿಸುವವರು | ಸಾರಿಗೆ ಮತ್ತು ಮುಜರಾಯಿ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| ಅ) | ಗುಲ್ಬರ್ಗಾ ಜಿಲ್ಲೆ, ಅಫಜಲಪೂರ ತಾಲ್ಲೂಕಿನ ಘತ್ತರಗಿ ಭಾಗ್ಯವಂತಿ ದೇವಸ್ಥಾನಕ್ಕೆ ರಾಜ್ಯದಿಂದ, ಹೊರ ರಾಜ್ಯದಿಂದ ಲಕ್ಷಾಂತರ ಭಕ್ತಾದಿಗಳು ಆಗಮಿಸುತ್ತಿರುವುದರಿಂದ ಮೂಲಭೂತ ಸೌಕರ್ಯವಿಲ್ಲದೆ ಭಕ್ತಾಧಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು; (ಮಾಹಿತಿ ನೀಡುವುದು) | ಗುಲ್ಬರ್ಗಾ ಜಿಲ್ಲೆ ಅಫಜಲಪೂರ ತಾಲ್ಲೂಕಿನ ಘತ್ತರಗಿ ಭಾಗ್ಯವಂತಿ ದೇವಸ್ಥಾನವು ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಪ್ರವರ್ಗ 'ಎ' ಅಧಿಸೂಚಿತ ದೇವಾಲಯವಾಗಿರುತ್ತದೆ.<br>• ಸದರಿ ದೇವಾಲಯಕ್ಕೆ ಆಗಮಿಸುವ ಭಕ್ತಾಧಿಗಳಿಗೆ ಎರಡು ಶುದ್ಧ ಕುಡಿಯುವ ನೀರಿನ ಘಟಕಗಳ ಮೂಲಕ ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ.<br>• ಭಕ್ತಾಧಿಗಳಿಗೆ ಅನ್ನದಾಸೋಹ ವ್ಯವಸ್ಥೆ ಕಲ್ಪಿಸಲಾಗಿದೆ.<br>• ಅಗತ್ಯವಿರುವ ಶೌಚಾಲಯದ ವ್ಯವಸ್ಥೆಯನ್ನು ಈಗಾಗಲೇ ಕಲ್ಪಿಸಲಾಗಿದೆ.<br>• ಮಕ್ಕಳಿಗೆ ಹಾಲುಣಿಸುವ ಕೊಠಡಿಯ ವ್ಯವಸ್ಥೆ ಮಾಡಲಾಗಿದೆ.<br>• ಭದ್ರತೆ ದೃಷ್ಟಿಯಿಂದ ಸಿ.ಸಿ. ಕ್ಯಾಮೇರಾಗಳನ್ನು ಅಳವಡಿಸಲಾಗಿದೆ.<br>ಮುಂದುವರೆದು, ಇನ್ನೂ ಹೆಚ್ಚಿನ ಮೂಲಭೂತ ಸೌಕರ್ಯದ ಅವಶ್ಯಕತೆ ಕಂಡುಬಂದಲ್ಲಿ ದೇವಾಲಯದ ನಿಧಿಯಿಂದ ಅಭಿವೃದ್ಧಿ ಕಾಮಗಾರಿಗಳಿಗೆ ಮೊತ್ತವನ್ನು ಆಯಾಯ ವರ್ಷದ ಆಯವ್ಯಯದ ಲಭ್ಯತೆಗೆ ಅನುಗುಣವಾಗಿ ಯೋಜನೆಯನ್ನು ತಯಾರಿಸಿಕೊಂಡು, ಸಕ್ಷಮ ಪ್ರಾಧಿಕಾರದಿಂದ ಮಂಜೂರಾತಿ ಪಡೆದು, ಹೆಚ್ಚಿನ ಮೂಲಭೂತ ಸೌಕರ್ಯ ಕಲ್ಪಿಸಲಾಗುತ್ತಿದೆ. |
| ಆ) | ದೇವಸ್ಥಾನದಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಕಳೆದ 5-6 ತಿಂಗಳಿಂದ ವೇತನ ಬಿಡುಗಡೆಯಾಗದಿರಲು ಕಾರಣವೇನು ಮತ್ತು ಯಾವಾಗ ವೇತನ ಬಿಡುಗಡೆ ಮಾಡಲಾಗುವುದು; (ಮಾಹಿತಿ ನೀಡುವುದು) | ಕಾರ್ಯನಿರ್ವಾಹಕ ಅಧಿಕಾರಿ, ಘತ್ತರಗ ಭಾಗ್ಯವಂತಿ ದೇವಸ್ಥಾನ ಇವರ ವರದಿಯನ್ವಯ ಗುಲ್ಬರ್ಗಾ ಜಿಲ್ಲೆ ಅಫಜಲಪೂರ ತಾಲ್ಲೂಕಿನ ಘತ್ತರಗ ಶ್ರೀ ಭಾಗ್ಯವಂತಿ ದೇವಸ್ಥಾನದಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಪ್ರತಿ ತಿಂಗಳು ವೇತನ ಪಾವತಿಸಲಾಗುತ್ತಿದೆ. |

ಸಂಖ್ಯೆ: ಕಂಇ 65 ಮುಸಪ್ರ 2025

(ರಾಮಲಿಂಗಾರೆಡ್ಡಿ)
**ಸಾರಿಗೆ ಮತ್ತು ಮುಜರಾಯಿ ಸಚಿವರು**